ಶ್ರೀ ಕೆ.ಬಿ. ಕೋಳಿವಾಡ :— ಮಾನ್ಯ ಉಪಾಧ್ಯಕ್ಷರೆ, ಸದನದಲ್ಲಿ ಏನು ನಡೆಯಯುತ್ತಿದೆ ಎಂಬುದರ ಬಗ್ಗೆ ನನಗೆ ಅರ್ಥವಾಗುತ್ತಿಲ್ಲ. ನಾನು ಕಳೆದ 30 ವರ್ಷಗಳಿಂದ ಸದನದ ವ್ಯವಹಾರಗಳನ್ನು ನೋಡಿಕೊಂಡು ಬಂದಿದ್ದೇವೆ. ಪ್ರಶ್ನೋತ್ತರ ವೇಳೆ ಮುಗಿದಿದೆಯೇ? ಅದು ಗೊತ್ತಿಲ್ಲ, ಶೂನ್ಯವೇಳೆಯನ್ನು ತೆಗೆದುಕೊಂಡಿದ್ದೀರಾ? ಅದೂ ಗೊತ್ತಿಲ್ಲ. ಯಾರೋ ಎದ್ದುನಿಂತುಕೊಂಡು ಮನಸ್ಸಿಗೆ ಬಂದಂತೆ ಏನೋ ವಿಷಯವನ್ನು ತೆಗೆದುಕೊಂಡು ಮಾತನಾಡಿದರೆ ಹೇಗೆ ಸದನವನ್ನು ನಡೆಸುತ್ತೀರಿ? ಇದು ನನಗೆ ಅರ್ಥವಾಗುತ್ತಿಲ್ಲ.

ಉಪಾಧ್ಯಕ್ಷರು :— ಈಗ ಪ್ರಶ್ನೋತ್ತರ ವೇಳೆ ಮುಗಿದಿದೆ. ಶೂನ್ಯವೇಳೆಯನ್ನು ಮಧ್ಯಾಹ್ನ ತೆಗೆದುಕೊಳ್ಳುತ್ತೇನೆ. ಈಗ ಶೂನ್ಯವೇಳೆ ಇಲ್ಲ, ಈಗ ನಾನು ಒಂದು ವಿಷಯವನ್ನು ಹೇಳುತ್ತೇನೆ, ಆಮೇಲೆ ಡಾ. ರಾಜ್‌ಕುಮಾರ್‌ರವರ ವಿಷಯದ ಬಗ್ಗೆ ಚರ್ಚೆಯು ನಡೆಯುತ್ತದೆ.

(3) ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಉಪಾಧ್ಯಕ್ಷರು :— ಈಗ ಕಾರ್ಯದರ್ಶಿಯವರು ವಿಧಾನಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಧಿಕೃತವಾಗಿ ಅಂಗೀಕೃತವಾದ ಕರ್ನಾಟಕ ಮಾಹಿತಿ ಪಡೆಯಲು ಹಕ್ಕು ವಿಧೇಯಕ 2000 ಇದನ್ನು ಸಭೆಯ ಮುಂದಿಡುವುದು.

ಕಾರ್ಯದರ್ಶಿ :— ಸನ್ಮಾನ್ಯ ಉಪಾಧ್ಯಕ್ಷರೆ, ವಿಧಾನಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ಮಾಹಿತಿ ಪಡೆಯಲು ಹಕ್ಕು ವಿಧೇಯಕ, 2000 ಇದನ್ನು ಸಭೆಯ ಮುಂದಿಡುತ್ತೇನೆ. - **ಅನುಬಂಧ - (೧)**

(4) ಪ್ರಕಟಣೆ

ಉಪಾಧ್ಯಕ್ಷರು :— ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶಗಳು ಬಂದಿರುತ್ತವೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯ ವಿಧಾನ ಹಾಗೂ ನಡವಳಿಕೆಯ ನಿಯಮ 118ರ ಮೇರೆಗೆ ಕರ್ನಾಟಕ ವಿಧಾನ ಪರಿಷತ್ತು ದಿನಾಂಕ : 21-11-2000ರಂದು ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿತೆಂದು ಈ ಮೂಲಕ ತಿಳಿಸುತ್ತಿದ್ದೇನೆ.

1) ಕರ್ನಾಟಕ ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ ವಿಧೇಯಕ, 2000

2) ಕರ್ನಾಟಕ ಕಾನೂನುಗಳನ್ನು ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ ವಿಧೇಯಕ, 2000

3) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ನಿಯಂತ್ರಣ ತಿದ್ದುಪಡಿ ವಿಧೇಯಕ, 2000

—